# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಕೆಂಪೇಗೌಡನಗರ ಉಪವಿಭಾಗ,

ಬೃ.ಬೆಂ.ಮ.ಪಾಲಿಕೆ ಹೆಚ್. ಸಿದ್ದಯ್ಯ ರಸ್ತೆ, ಬೆಂಗಳೂರು

ಸಂಖ್ಯೆ:ಸ.ಇಂ/ವಾ-119/ವಾರ್ಡ್ ಸಭೆ/2022-23 ದಿನಾಂಕ: 15-10-2022

## ವಾರ್ಡ್ -119ರ ವಾರ್ಡ್ ಸಭೆಯ ನಡವಳಿ

ದಿನಾಂಕ:15-10-2022 ರಂದು ಕೆಂಪೇಗೌಡನಗರ ಉಪವಿಭಾಗ ವಾರ್ಡ್-119 ರ ವಾರ್ಡ್ ಕಛೇರಿಯಲ್ಲಿ ಶ್ರೀ.ಎಸ್.ಟಿ.ಶ್ರೀನಿವಾಸ್ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕಾರ್ಯಪಾಲಕ ಅಭಿಯಂತರರು(ಟಿ.ಇ.ಸಿ)ವಿಭಾಗ ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿಗಳು.

**ಹಾಜರಿದ್ದವರು:-**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ.ಎಸ್.ಟಿ.ಶ್ರೀನಿವಾಸ್ | ನೋಡಲ್ ಅಧಿಕಾರಿಗಳು | 9739520995 |
| 2 | ಶ್ರೀ.ಎನ್.ಕೆ.ಸತ್ಯ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ:119 | 9480688119 |
| 3 | ಶ್ರೀ.ಆರ್.ದೊರೈರಾಜ್ | ಕಂದಾಯ ಪರಿವೀಕ್ಷಕರು ವಾರ್ಡ್-119 | 9900595529 |
| 4 | ಶ್ರೀ. ಕರ್ತಿಕ್ | ಕಿರಿಯ ಅಭಿಯಂತರರು ಬೆಸ್ಕಾಂ | 9449875558 |
| 5 | ಬಿ.ಎಲ್.ಅರವಿಂದ್ | ಕೆಲಸ ಪರಿವೀಕ್ಷಕರು-ಬಿ.ಡಬ್ಲ್ಯೂ.ಎಸ್.ಎಸ್.ಬಿ | 9448314149 |
| 6 | ಎಂ.ಬಾಬುಕುಮಾರ್ | ಕೆಲಸ ಪರಿವೀಕ್ಷಕರು ವಾರ್ಡ್-119 | 9008233973 |
| 7 | ಎನ್.ನಾಗರಾಜು | ಕಿರಿಯ ಆರೋಗ್ಯ ಪರಿವೀಕ್ಷಕರು | 8073493562 |
| 8 | ಸಂದೇಶ್.ಹಚ್.ಎಂ | ಸ.ಅ(ವಾರ್ಡ್-119) | 9611667101 |
| 9 | ಸುರೇಶ್ | ಕಿರಿಯ ಆರೋಗ್ಯ ಪರಿವೀಕ್ಷಕರು | 9480688719 |
| 10 | ಬಿ.ಎಂ.ಷಣ್ಮಗಂ | ಸ್ಥಳೀಯರು | |
| 11 | ಎಸ್.ಮಹೇಶ್ ಕುಮಾರ್ | ಸ್ಥಳೀಯರು | |
| 12 | ಸಿ.ಮಂಜುನಾಥ | ಸ್ಥಳೀಯರು | |

ಮಾನ್ಯ ಅಧ್ಯಕ್ಷರು, ಮೇಲ್ಕಂಡ ಎಲ್ಲರನ್ನು ಸ್ವಾಗತದೊಂದಿಗೆ ಪರಸ್ಪರ ಪರಿಚಯ ಮಾಡಿಕೊಳ್ಳಲು ತಿಳಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು.

**ಚರ್ಚಿಸಲಾದ ವಿಷಯಗಳು:-**

ವಾರ್ಡ್ ವ್ಯಾಪ್ತಿಯಲ್ಲಿ ಬಸ್ ಶೆಲ್ಟರ್ ಅನ್ನು ನಿರ್ಮಿಸುವುದು. ಕಲಾಸಿಪಾಳ್ಯ ಹಾಗೂ ಟೌನ್ ಹಾಲ್ ಬೆಳಗಿನ ಜಾವ 3.00 ಘಂಟೆಗೆ ಅಂಗಡಿಗಳನ್ನು ಹಾಕುತ್ತಿದ್ದುಮ ಇವುಗಳನ್ನು ತೆರವುಗೊಳಿಸುವುದು. ಮಾನ್ಯ ನೋಡಲ್ ಅಧಿಕಾರಿಗಳು ಈ ಎಲ್ಲಾ ವಿಷಯಗಳ ಬಗ್ಗೆ ಸಭೆಯಲ್ಲಿ ಕೂಲಂಕುಷವಾಗಿ ಚರ್ಚೆ ಮಾಡಲಾಗಿ ಸದರಿ ವಿಷಯಗಳ ಬಗ್ಗೆ ಸೂಕ್ತ ರೀತಿಯಲ್ಲಿ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ಅಭಿಯಂತರರಿಗೆ ಸೂಚಿಸಿದರು.

ವಾರ್ಡ್‌ನಲ್ಲಿ ಹಸಿಕಸ ಮತ್ತು ಒಣಕಸವನ್ನು ವಿಂಗಡಿಸಿ ಕೊಡುವಂತೆ ಸಾರ್ವಜನಿಕರಲ್ಲಿ ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕೆಂದು ಕೋರಿದರು. ಆದ ಮಾನ್ಯ ನೋಡಲ್ ಅಧಿಕಾರಿಗಳು ವಾರ್ಡ್ ಅಭಿಯಂತರರು ಮತ್ತು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ನಂತರ ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ಗುಂಡಿಗಳಾಗಿದ್ದು ಅವುಗಳನ್ನು ಮುಚ್ಚುವಂತೆ ಕೋರಿದರು. ಮತ್ತು ಸಮರ್ಪಕವಾಗಿ ತ್ಯಾಜ್ಯ ವಿಲೇವಾರಿಯಾಗುತ್ತಿಲ್ಲವೆಂದು ಸಭೆಯ ಗಮನಕ್ಕೆ ತಂದರು. ಈ ವಿಷಯಗಳ ಬಗ್ಗೆ ಮಾನ್ಯ ನೋಡಲ್ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವಂತೆ ಸಹಾಯಕ ಅಭಿಯಂತರರು ಮತ್ತು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.

ನಂತರ ವಾರ್ಡ್‌ನ ಅಭಿಯಂತರರು ಮಾತನಾಡಿ ಬೆಸ್ಕಾಂನಿಂದ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸಿ ಡೆಬ್ರೀಸ್‌ನ್ನು ಸ್ಥಳದಲ್ಲಿಯೇ ಬಿಟ್ಟಿರುವುದನ್ನು ತೆರವುಗೊಳಿಸುವಂತೆ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂನ ಕಿರಿಯ ಅಭಿಯಂತರರಿಗೆ ಸೂಚಿಸಿದರು.

ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಕೆಲಸ ಪರಿವೀಕ್ಷಕರಿಗೆ ಮಳೆ ಹೆಚ್ಚಾಗಿರುವುದರಿಂದ ದೂರುಗಳನ್ನು ಕೂಡಲೇ ಸ್ಪಂದಿಸಬೇಕೆಂದು ತಿಳಿಸಿರುತ್ತಾರೆ ಹಾಗೂ ಮುಂದಿನ ಸಭೆಗೆ ಕಡ್ಡಾಯವಾಗಿ ಎಲ್ಲಾ ಅಧಿಕಾರಿಗಳಿಗೆ ವಾರ್ಡ್ ಸಮಿತಿ ಸಭೆಗೆ ಸಮಯಕ್ಕೆ ಸರಿಯಾಗಿ ಹಾಜರಾಗುವಂತೆ ಸೂಚಿಸಿ, ತಪ್ಪಿದಲ್ಲಿ ಹಾಜರಾಗದ ಅಧಿಕಾರಿಗಳಿಗೆ ನೋಟೀಸ್ ಜಾರಿ ಮಾಡಲು ತಿಳಿಸಿರುತ್ತಾರೆ. ಹಾಜರಿದ್ದ ಅಧಿಕಾರಿಗಳಿಗೆ ಸಮನ್ವಯ ಸಾಧಿಸಿಕೊಂಡು ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಸಹಕಾರ ನೀಡುವಂತೆ ಕೋರುತ್ತಾ, ಸಭೆಗೆ. ಹಾಜರಿದ್ದ ಎಲ್ಲಾರಿಗೂ ವಂದನೆಗಳನ್ನು ಅರ್ಪಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

15/10/2022

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ –119 ಧರ್ಮರಾಯಸ್ವಾಮಿ ದೇವಸ್ಥಾನ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 119